ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 51 |
| ಮಾನ್ಯ ಸದಸ್ಯರ ಹೆಸರು | ಶ್ರೀ. ಧನಂಜಯ ಸರ್ಜಿ (ಪದವಿಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 15.07.2024 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಈವರೆಗೆ ಒಟ್ಟು ಎಷ್ಟು ಡೆಂಗ್ಯೂ ಪ್ರಕರಣಗಳು ಕಂಡು ಬಂದಿವೆ; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ ದಿನಾಂಕ: 11.07.2024ರ ವರೆಗೆ ಒಟ್ಟು 8221ಪ್ರಕರಣಗಳು ವರದಿಯಾಗಿರುತ್ತವೆ.<br>ಜಿಲ್ಲಾವಾರು ವಿವರವನ್ನು **ಅನುಬಂಧ - 1** ರಲ್ಲಿ ನೀಡಲಾಗಿದೆ. |
| ಆ | ಡೆಂಗ್ಯೂ ನಿಯಂತ್ರಣಕ್ಕೆ ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ; | ರಾಜ್ಯದಲ್ಲಿ ಡೆಂಗ್ಯೂ ನಿಯಂತ್ರಣಕ್ಕೆ ಕೈಗೊಂಡಿರುವ ಮುಂಜಾಗ್ರತ ಕ್ರಮಗಳ ವಿವರಗಳನ್ನು **ಅನುಬಂಧ - 2** ರಲ್ಲಿ ನೀಡಲಾಗಿದೆ. |
| ಇ | ಡೆಂಗ್ಯೂ ಬಂದಿರುವ ರೋಗಿಗಳಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಯಾವ ರೀತಿಯ ಚಿಕಿತ್ಸೆ ನೀಡಲಾಗಿರುತ್ತದೆ; | ಡೆಂಗ್ಯೂ ಜ್ವರಕ್ಕೆ ನಿರ್ಧಿಷ್ಟ ಚಿಕಿತ್ಸೆ ಇರುವುದಿಲ್ಲ. ರೋಗಲಕ್ಷಣಗಳಿಗೆ ಅನುಗುಣವಾಗಿ ಚಿಕಿತ್ಸೆ ನೀಡಲಾಗುತ್ತದೆ.<br>ಶೇ.85 ರಿಂದ 90 % ರಷ್ಟು ಜನರಲ್ಲಿ ಡೆಂಗ್ಯೂ ಜ್ವರವು ಸಹಜವಾಗಿಯೇ ಗುಣವಾಗುತ್ತದೆ. ಉಳಿದ ಶೇಕಡಾ 10-15 ರಷ್ಟು ಜನರಿಗೆ ಮಾತ್ರ ರೋಗದ ತೀವ್ರತೆಗೆ ಅನುಗುಣವಾಗಿ ಆಸ್ಪತ್ರೆಗೆ ದಾಖಲಿಸಬೇಕಾಗುತ್ತದೆ.<br>ಆಸ್ಪತ್ರೆಯಲ್ಲಿಯೂ ಸಹ ರೋಗ ಲಕ್ಷಣಗಳಿಗೆ ಅನುಗುಣವಾಗಿಯೇ ಚಿಕಿತ್ಸೆಯನ್ನು ನೀಡಲಾಗುತ್ತದೆ. ಶೇ 1 ರಷ್ಟು ಜನರಲ್ಲಿ ಮಾತ್ರ ರೋಗ ತೀವ್ರ ಸ್ವರೂಪವಾಗಬಹುದು.<br>ಡೆಂಗ್ಯೂ ಜ್ವರದ ಪ್ರಕರಣಗಳಿಗೆ National Centre for Vector Borne Disease Control, Govt. of India, ಇವರ National Guidelines for Management of Dengue fever-2023ರ ಪ್ರಕಾರ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಯನ್ನು ನೀಡಲಾಗುತ್ತಿದೆ.<br>ಡೆಂಗ್ಯೂ ಜ್ವರ ಪ್ರಕರಣಗಳ ಅಗತ್ಯ ನಿರ್ವಹಣೆಗಾಗಿ ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಕ್ರಮವಾಗಿ ಕನಿಷ್ಠ 5 ಹಾಗೂ 8-10 ಬೆಡ್‌ಗಳನ್ನು ಮೀಸಲಿರಿಸಲಾಗಿದೆ.<br>ಡೆಂಗ್ಯೂ ಜ್ವರ ಪ್ರಕರಣಗಳ ಪರೀಕ್ಷೆ, ಚಿಕಿತ್ಸೆ ಹಾಗೂ ನಿರ್ವಹಣೆ ಸೌಲಭ್ಯಗಳನ್ನು (ICU ಸೇರಿದಂತೆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿನ ಎಲ್ಲಾ ಆರೋಗ್ಯ ಸಂಸ್ಥೆಗಳಲ್ಲಿ ಸಂಪೂರ್ಣ ಉಚಿತವಾಗಿ ಒದಗಿಸಲಾಗುತ್ತಿದೆ. (BPL ಮತ್ತು APL ವರ್ಗದವರಿಗೆ) |
| ಈ | ಡೆಂಗ್ಯೂ ಜ್ವರದಿಂದ ಮರಣ ಹೊಂದಿದವರ ಸಂಖ್ಯೆ ಎಷ್ಟು ಹಾಗೂ ಪ್ರಸ್ತುತ ಐ.ಸಿ.ಯು ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳ ಸಂಖ್ಯೆ ಎಷ್ಟು? | 01ನೇ ಜನವರಿ 2024 ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಒಟ್ಟು 07 ಮಂದಿ ಧೃಡಪಟ್ಟ ಡೆಂಗ್ಯೂಯಿಂದ ಮರಣ ಹೊಂದಿರುತ್ತಾರೆ. |

| Sl. no | Districts | No of Deaths |
|---|---|---|

| | | |
|---|---|---|
| (ಜಿಲ್ಲಾವಾರು ವಿವರ ನೀಡುವುದು) | | |

| | | |
|---|---|---|
| 1 | Hassan | 2 |
| 2 | Dharwad | 1 |
| 3 | Haveri | 1 |
| 4 | Shivamogga | 1 |
| 5 | Mysuru | 1 |
| 6 | BBMP | 1 |
| | **Total** | **7** |

ದಿನಾಂಕ:11-07-2024 ರವರೆಗೆ ರಾಜ್ಯದ ಸಿ.ಎಫ್.ಆರ್ (ಮರಣ ಪ್ರಮಾಣದ ದರ) 0.08 ಆಗಿರುತ್ತದೆ.

ರಾಜ್ಯದಲ್ಲಿ ದಿನಾಂಕ: 11.07.2024 ರಂದು ಐ.ಸಿ.ಯು ನಲ್ಲಿ 15 ಡೆಂಗ್ಯೂ ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ.

ಜಿಲ್ಲಾವಾರು ವಿವರವನ್ನು **ಅನುಬಂಧ - 03** ರಲ್ಲಿ ನೀಡಲಾಗಿದೆ.

**ಆಕುಕ 52 ಎಸ್‌ಎಂಎಂ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

# ಅನುಬಂಧ -1

## ಡೆಂಗಿ ಪ್ರಕರಣಗಳ ಜಿಲ್ಲಾವಾರು ವಿವರವು

ದಿನಾಂಕ 01.01.2024 ರಿಂದ 11.07.2024 ರ ವರೆಗೆ ಈ ಕೆಳಕಂಡಂತಿದೆ.

| SL NO | District | Dengue |
|---|---|---|
| 1 | Chikkamagaluru | 580 |
| 2 | Mysuru | 540 |
| 3 | Haveri | 496 |
| 4 | Dharwada | 334 |
| 5 | Chitradurga | 320 |
| 6 | Shivamogga | 315 |
| 7 | Mandya | 315 |
| 8 | Dakshina Kannada | 263 |
| 9 | Hassan | 262 |
| 10 | Udupi | 215 |
| 11 | Tumakuru | 207 |
| 12 | Kalaburagi | 203 |
| 13 | Davanagere | 199 |
| 14 | Vijayapura | 198 |
| 15 | Belagavi | 177 |
| 16 | Uttara kannada | 129 |
| 17 | Kodagu | 125 |
| 18 | Chikkaballapura | 101 |
| 19 | Koppal | 101 |
| 20 | Ballari | 92 |
| 21 | Bidar | 72 |
| 22 | Ramanagar | 71 |
| 23 | Kolar | 71 |
| 24 | Chamarajanagar | 67 |
| 25 | Bagalkote | 65 |
| 26 | Gadag | 62 |
| 27 | Vijaya nagar | 45 |
| 28 | Raichur | 43 |
| 29 | Bangaluru (U) | 42 |
| 30 | Bangaluru (R) | 32 |
| 31 | Yadageri | 16 |
| Total | | 5758 |
| **BBMP** | | **2463** |
| **Total** | | **8221** |

ಅನುಬಂಧ - 2

ಡೆಂಗಿ ಜ್ವರವು ಈಡಿಸ್ ಸೊಳ್ಳೆಗಳಿಂದ ಹರಡುವ ಸೋಂಕಾಗಿದ್ದು, ಇದರ ನಿಯಂತ್ರಣಕ್ಕಾಗಿ ರಾಜ್ಯದಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ಡೆಂಗಿ ಜ್ವರವನ್ನು ಕರ್ನಾಟಕ ಸಾರ್ವಜನಿಕ ಆರೋಗ್ಯ ನಿಯಮಗಳ ಅಡಿಯಲ್ಲಿ ಅಧಿಸೂಚಿತ ರೋಗವೆಂದು ಪ್ರಕಟಿಸಲಾಗಿದ್ದು, (Dengue including DHF & DSS, is under notifiable disease act under the Karnataka public health act vide Govt. Notification No:HFW/30SMM/98.Dt:13.03.1998)) ಡೆಂಗಿ ಜ್ವರದ ಮುನ್ನೆಚ್ಚರಿಕೆ ಕ್ರಮವಾಗಿ ಎಲ್ಲಾ ಖಾಸಗಿ ಆರೋಗ್ಯ ಸಂಸ್ಥೆಗಳೂ ಸಹ ಡೆಂಗಿ ಪ್ರಕರಣಗಳ ಮಾಹಿತಿಯನ್ನು ಆರೋಗ್ಯ ಇಲಾಖೆಗೆ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.
2. ಮುಂಗಾರು ಪೂರ್ವ, ಮುಂಗಾರು ಹಾಗೂ ಮುಂಗಾರಿನ ನಂತರದ ದಿನಗಳಲ್ಲಿ ಡೆಂಗಿಜ್ವರ ಪ್ರಸರಣವು ಅಧಿಕವಾಗುವ ಹಿನ್ನೆಲೆಯಲ್ಲಿ ವರ್ಷದ ಆರಂಭದಲ್ಲಿಯೇ, ಬೆಂಗಳೂರು ನಗರ ಸೇರಿದಂತೆ, ಎಲ್ಲಾ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಿಗೆ ಮಾರ್ಗಸೂಚಿ ಸುತ್ತೋಲೆಯನ್ನು ಕಳುಹಿಸಿದ್ದು, ಡೆಂಗಿ ನಿಯಂತ್ರಣಕ್ಕೆ ಸನ್ನದ್ಧಸ್ಥಿತಿಯಲ್ಲಿರಲು ಸೂಚಿಸಲಾಗಿದೆ.
3. ಪ್ರವಾಹ ಹಾಗೂ ನಂತರದ ಸಮಯದಲ್ಲಿ ಈಡಿಸ್ ಸೊಳ್ಳೆಗಳ ಉತ್ಪತ್ತಿತಾಣ ನಾಶ ಹಾಗೂ ಡೆಂಗೀ ನಿಯಂತ್ರಣದ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಕುರಿತು ಮಾರ್ಗದರ್ಶಿ ಸುತ್ತೋಲೆಗಳನ್ನು ಎಲ್ಲಾ ಜಿಲ್ಲೆಗಳಿಗೆ ನೀಡಲಾಗಿದೆ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿನಾಂಕ:07-06-2024 ರಂದು ಅಂತರ್ ಇಲಾಖಾ ಸಮನ್ವಯ ಸಭೆಯನ್ನು ನಡೆಸಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ & ಪಂಚಾಯತ್‌ರಾಜ್ ಇಲಾಖೆ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕೃಷಿ, ಮೀನುಗಾರಿಕೆ, ಸಾರಿಗೆ ಇಲಾಖೆ ಇತ್ಯಾದಿಗಳ ಇಲಾಖೆಯ ಮುಖ್ಯಸ್ಥರೊಂದಿಗೆ ಸಭೆ ನಡೆಸಿ, ಡೆಂಗಿ ಜ್ವರ ನಿಯಂತ್ರಣದಲ್ಲಿ, ಎಲ್ಲಾ ಇಲಾಖೆಗಳು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಲು ಸೂಚಿಸಲಾಗಿದೆ. ರಾಜ್ಯದಲ್ಲಿ ಅತಿಹೆಚ್ಚು ಡೆಂಗಿ ಜ್ವರ ಪ್ರಕರಣಗಳು ವರದಿಯಾಗಿರುವ (ಮೈಸೂರು, ಚಿಕ್ಕಮಗಳೂರು, ಶಿವಮೊಗ್ಗ, ಚಿತ್ರದುರ್ಗ, ಹಾವೇರಿ) ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ನಿಯಂತ್ರಣ ಕ್ರಮಗಳನ್ನು ಸಮರೋಪಾಧಿಯಲ್ಲಿ ಅನುಷ್ಠಾನಗೊಳಿಸಲು ಸೂಚಿಸಿದರು..
5. ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇವರ ಅಧ್ಯಕ್ಷತೆ ದಿನಾಂಕ:25.06.2024 ರಂದು, ವರ್ಚುಯಲ್ ಮೂಲಕ ಜಿಲ್ಲಾ ಆರೋಗ್ಯ ಮತ್ತು ಕುಕ ಅಧಿಕಾರಿಗಳು ಮತ್ತು ಡಿವಿಬಿಡಿಸಿಓ ಗಳ ಸಭೆ ನಡೆಸಿ ಡೆಂಗಿ ಜ್ವರ ನಿಯಂತ್ರಿಸಲು ಸಲಹೆಯನ್ನು ನೀಡಿರುತ್ತಾರೆ.

6. ದಿನಾಂಕ: 25-06-2024 ರಂದು ಸನ್ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ಡೆಂಗಿ ನಿಯಂತ್ರಣಕ್ಕೆ ಸಮನ್ವಯ ಸಭೆಯನ್ನು ನಡೆಸಿ ರಾಜ್ಯಾದ್ಯಂತ ಪ್ರತಿ ಶುಕ್ರವಾರ "ಲಾರ್ವಾ ನಿರ್ಮೂಲನ ದಿನ"ವನ್ನು ಆಚರಿಸಲು ಮಾನ್ಯ ಮುಖ್ಯ ಮಂತ್ರಿಯವರು ಸಲಹೆ ನೀಡಿರುತ್ತಾರೆ.

7. ದಿನಾಂಕ:02-07-2024 ರಂದು ಮಾನ್ಯ ಆರೋಗ್ಯ ಸಚಿವರ ಅಧ್ಯಕ್ಷತೆಯಲ್ಲಿ ಅಂತರ್ ಇಲಾಖಾ ಸಮನ್ವಯ ಸಭೆಯನ್ನು ಏರ್ಪಡಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ, ಗ್ರಾಮೀಣಾಭಿವೃದ್ಧಿ & ಪಂಚಾಯತ್‌ರಾಜ್, ನಗರ ಅಭಿವೃದ್ಧಿ ಇಲಾಖೆ, ಪೌರಾಡಳಿತ ಇಲಾಖೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗು ಇತ್ಯಾದಿ ಇಲಾಖೆಗಳೊಂದಿಗೆ ಸಭೆ ನಡೆಸಿ, ಡೆಂಗಿ ಜ್ವರ ನಿಯಂತ್ರಿಸಲು ತಮ್ಮ ತಮ್ಮ ಇಲಾಖಾ ವ್ಯಾಪ್ತಿಯಲ್ಲಿ ಶೀಘ್ರವೇ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದರು.

8. ದಿನಾಂಕ: 04-07-2024 ರಂದು ಮಾನ್ಯ ಆರೋಗ್ಯ ಸಚಿವರ ಅಧ್ಯಕ್ಷತೆಯಲ್ಲಿ ರಾಜ್ಯಾದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಎಲ್ಲಾ ಕಾರ್ಯನಿರ್ವಾಹಣಾಧಿಕಾರಿಗಳು ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ವರ್ಚುಯಲ್ ಸಭೆನಡೆಸಿ, ಜಿಲ್ಲಾಧಿಕಾರಿಗಳಿಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಪ್ರತಿ ಶುಕ್ರವಾರ ತಮ್ಮ ತಮ್ಮ ಇಲಾಖೆಯ ಕಛೇರಿಗಳಲ್ಲಿ ಲಾರ್ವಾ ನಿರ್ಮೂಲನ ದಿನದ ಕಾರ್ಯಕ್ರಮವನ್ನು ಹಮ್ಮಿಕೊಂಡು ಲಾರ್ವಾ ನಾಶಪಡಿಸಿ ಡೆಂಗಿ ಜ್ವರ ಹರಡದಂತೆ ಕ್ರಮಕೈಗೊಳ್ಳಲು ಸೂಚಿಸಿದರು.

9. ದಿನಾಂಕ: 08-07-2024 ಮತ್ತು 09-07-2024 ಸನ್ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ರಾಜ್ಯಾದ ಮುಖ್ಯ ಕಾರ್ಯದರ್ಶಿಗಳು, ಅಪರ ಮುಖ್ಯ ಕಾರ್ಯದರ್ಶಿಗಳು, ಎಲ್ಲಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು ಮತ್ತು ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಕಾರ್ಯನಿರ್ವಾಹಣಧಿಕಾರಿಗಳ ಸಭೆಯನ್ನು ನಡೆಸಿ ಡೆಂಗಿ ನಿಯಂತ್ರಣಕ್ಕೆ ಎಲ್ಲಾ ಇಲಾಖೆಗಳ ಸಮನ್ವಯತೆಯೊಂದಿಗೆ ಸಮರೋಪಾಧಿಯಲ್ಲಿ ಡೆಂಗಿಜ್ವರ ಹರಡದಂತೆ ಎಲ್ಲಾ ನಿಯಂತ್ರಣ ಕ್ರಮಗಳನ್ನು ಹಾಗೂ ಎಲ್ಲರಿಗೂ ಸೂಕ್ತ ಚಿಕಿತ್ಸೆ ದೊರೆಯುವಂತೆ ಮತ್ತು ಮರಣ ಪ್ರಕರಣಗಳು ಸಂಭವಿಸದಂತೆ ಸೂಕ್ತ ಕ್ರಮಕೈಗೊಂಡು ಕ್ಷಿಪ್ರ ಕಾರ್ಯಾಚರಣೆ ಪಡೆಯನ್ನು ತಮ್ಮ ತಮ್ಮ ಜಿಲ್ಲೆಯಲ್ಲಿ ರಚಿಸಿ, ಡೆಂಗಿ ಕಂಡು ಬಂದ ಗ್ರಾಮಗಳಿಗೆ ಶೀಘ್ರವೇ ಭೇಟಿನೀಡಿ ನಿಯಂತ್ರಣ ಕ್ರಮಕೈಗೊಳ್ಳಲು ಸೂಚಿಸಿದರು. ಪ್ರತಿ ಶುಕ್ರವಾರ ಎಲ್ಲಾ ಜಿಲ್ಲಾಧಿಕಾರಿಗಳು ಸೇರಿದಂತೆ ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ತಪ್ಪದೇ ಲಾರ್ವಾ ನಿರ್ಮೂಲನ ದಿನವನ್ನು ನಡೆಸಲು ಸೂಚಿಸಿದರು.

10. ಡೆಂಗಿ ರೋಗದ ಶೀಘ್ರ ಪತ್ತೆಗಾಗಿ ಆರೋಗ್ಯ ಕಾರ್ಯಕರ್ತರು ಹಾಗೂ ಆಶಾ ಕಾರ್ಯಕರ್ತೆಯರು ಮನೆಮನೆಗೆ ಭೇಟಿ ನೀಡಿ ಜ್ವರ ಸಮೀಕ್ಷಾ ಕಾರ್ಯವನ್ನು ನಿರಂತರವಾಗಿ ಮಾಡುತ್ತಿದ್ದಾರೆ. ಇದೇ ಸಮಯದಲ್ಲಿ ಡೆಂಗಿ ಜ್ವರದ ಲಕ್ಷಣಗಳು ಹಾಗೂ ಈಡೀಸ್ ಸೊಳ್ಳೆಗಳ ಉತ್ಪತ್ತಿ ತಾಣ ಮತ್ತು ಅವುಗಳ ನಿರ್ಮೂಲನೆಯ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿ ಅರಿವು ಮೂಡಿಸುತ್ತಿದ್ದಾರೆ.

11. ಹೆಚ್ಚು ಜ್ವರ ಪ್ರರಕರಣಗಳು ವರದಿಯಾಗುತ್ತಿರುವ ಸ್ಥಳಗಳಲ್ಲಿ ಫಿವರ್ ಕ್ಲಿನಿಕ್ ಸ್ಥಾಪಿಸಿ, ಡೆಂಗಿ ರೋಗವನ್ನು ಪತ್ತೆ ಹಚ್ಚುವ ಮತ್ತು ಚಿಕಿತ್ಸೆ ನೀಡುವ ಕಾರ್ಯವನ್ನು ಮಾಡಲಾಗುತ್ತಿದೆ.

12. ಶಂಕಿತ ಡೆಂಗಿ ಪ್ರಕರಣಗಳ ರಕ್ತದ ಮಾದರಿಗಳನ್ನು ಸೆಂಟಿನಲ್ ಪ್ರಯೋಗಾಲಯಗಳಲ್ಲಿ ಉಚಿತವಾಗಿ ಪರೀಕ್ಷಿಸಲಾಗುತ್ತಿದೆ. ಇದಕ್ಕಾಗಿ, ಅಗತ್ಯವಿರುವ ELISA ಆಧಾರಿತ ಎನ್‌ಎಸ್1 ಹಾಗೂ ಐ ಜಿ ಎಂ ಕಿಟ್ಟುಗಳನ್ನು ಸಾಕಷ್ಟು ಪ್ರಮಾಣದಲ್ಲಿ ಎಲ್ಲಾ ಪ್ರಯೋಗಾಲಯಗಳಿಗೆ ಸರಬರಾಜು ಮಾಡಲಾಗಿದೆ.

13. ಬಿಬಿಎಂಪಿ ವ್ಯಾಪ್ತಿಯಲ್ಲಿನ ನಗರ ಆರೋಗ್ಯ ಕೇಂದ್ರಗಳಲ್ಲಿ ಸಂಗ್ರಹಮಾಡಿದ ಶಂಕಿತ ಡೆಂಗಿ ರಕ್ತ ಮಾದರಿಗಳನ್ನು ಹೆಚ್.ಸಿದ್ದಯ್ಯ ರಸ್ತೆಯಲ್ಲಿರುವ ಆಸ್ಪತ್ರೆಯಲ್ಲಿನ ಎಸ್‌ಎಸ್‌ಎಲ್ ಪ್ರಯೋಗ ಶಾಲೆಯಲ್ಲಿ ಪರೀಕ್ಷೆ ಮಾಡಲಾಗುತ್ತಿದೆ.

14. ಎಲ್ಲಾ ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಡೆಂಗಿಜ್ವರ ಪ್ರಕರಣಗಳ ನಿರ್ವಹಣೆ ಮತ್ತು ರೋಗ ಲಕ್ಷಣಗಳಿಗೆ ಅನುಗುಣವಾದ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗಿದೆ. ಅಗತ್ಯವಿದ್ದಲ್ಲಿ ಹೆಚ್ಚುವರಿ ವಾರ್ಡಗಳ ವ್ಯವಸ್ಥೆ ಮಾಡಲು ಸೂಚಿಸಲಾಗಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ಡೆಂಗಿ ಜ್ವರಕ್ಕೆ ಬೇಕಾದ ನಿರ್ವಹಣಾ ವ್ಯವಸ್ಥೆಯನ್ನು ಸಹ ಒದಗಿಸಲಾಗಿದೆ. ಡೆಂಗಿ ರೋಗ ನಿರ್ವಹಣೆಗೆ ಬೇಕಾಗುವ ಜೀವರಕ್ಷಕ ಔಷಧಿಗಳು ಮತ್ತು ರೋಗ ಲಕ್ಷಣಗಳಿಗೆ ಅನುಗುಣವಾಗಿ ಬೇಕಾದ ಔಷಧೋಪಚಾರಗಳನ್ನು ತಾಲ್ಲೂಕು ಹಾಗು ಜಿಲ್ಲಾ ಮಟ್ಟದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಇರಿಸಲಾಗಿದೆ.

15. ಡೆಂಗಿ ರಕ್ತ ಸ್ರಾವಜ್ವರ (ಡೆಂಗಿ ಹೆಮರೇಜಿಕ್ ಪೀವರ್) ನಿರ್ವಹಣೆಗಾಗಿ, ಜಿಲ್ಲಾ ಮಟ್ಟದಲ್ಲಿ Blood component ಗಳ ಲಭ್ಯತೆಯ ಬಗ್ಗೆ ಇಲಾಖೆಯ ಅಂತರ್ಜಾಲದಲ್ಲಿ ಅಪ್‌ಲೋಡ್ ಮಾಡಲಾಗಿದೆ ಹಾಗೂ ಈ ಮಾಹಿತಿಯನ್ನು ಪ್ರತಿ ದಿನವು ಪರಿಷ್ಕರಿಸಿ ಪ್ರಕಟಿಸಲಾಗುತ್ತಿದೆ. (ಇ ರಕ್ತಕೋಶ್, e- Raktkosh)

16. ಡೆಂಗಿ ಖಚಿತ ಪಡಿಸಿಕೊಳ್ಳಲು ಎಲಿಸಾ ಆಧಾರಿತ NS1 & IgM ಪರೀಕ್ಷೆಗೆ ತಲಾ ರೂ 300/- ಮೀರದಂತೆ ಹಾಗೂ Screening test ಗಳಿಗೆ ( NS1, IgM & IgG) ರೂ 250/- ಗಳ ಶುಲ್ಕವನ್ನು ಖಾಸಗಿ ಆಸ್ಪತ್ರೆ ಹಾಗೂ ಖಾಸಗಿ ಪ್ರಯೋಗಶಾಲೆಗಳಿಗೆ ನಿಗದಿಗೊಳಿಸಲಾಗಿದ್ದು, ಸರ್ಕಾರಿ ಅಸ್ಪತ್ರೆಗಳಲ್ಲಿ ಉಚಿತವಾಗಿ ಪರೀಕ್ಷಿಸಲಾಗುತ್ತಿದೆ.

17. ರಾಜ್ಯ ಹಾಗೂ ಬಿಬಿಎಂಪಿ ವ್ಯಾಪ್ತಿಯಲ್ಲಿ, "ವಿಬಿಡಿ ಮರಣ ತಪಾಸಣಾ ಸಮಿತಿ" (VBD Death Audit committee) ಯನ್ನು ರಚಿಸಲಾಗಿದ್ದು, ಈ ಸಮಿತಿಯು ಶಂಕಿತ ಡೆಂಗಿ ರೋಗದಿಂದ ಸಂಭವಿಸಿರಬಹುದಾದ ಎಲ್ಲಾ ಮರಣ ಪ್ರಕರಣಗಳ ವರದಿಗಳನ್ನು ಪರಿಶೀಲಿಸಿ ನಂತರ ದೃಢೀಕರಿಸಲಾಗುತ್ತಿದೆ.

18. ಡೆಂಗಿ ನಿಯಂತ್ರಣಕ್ಕೆ ಈಡಿಸ್ ಸೊಳ್ಳೆಗಳ ಉತ್ಪತ್ತಿ ತಾಣ ನಾಶವು ಪ್ರಮುಖವಾಗಿರುವುದರಿಂದ, ಆರೋಗ್ಯ ಸಿಬ್ಬಂದಿ ಮತ್ತು ಆಶಾ ಕಾರ್ಯಕರ್ತರು ಪ್ರತಿ ಮನೆಯ ಒಳಾಂಗಣ ಮತ್ತು ಹೊರಾಂಗಣದಲ್ಲಿನ ನೀರಿನ ಶೇಖರಣೆಗಳಲ್ಲಿ ಈಡೀಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ಪತ್ತೆಹಚ್ಚಿ ಅವುಗಳ ನಿರ್ಮೂಲನೆಗೆ ಕ್ರಮಕೈಗೊಳ್ಳುತ್ತಿದ್ದಾರೆ.

19. ಈಡಿಸ್ ಲಾರ್ವಾ ಸಮೀಕ್ಷೆ ಹಾಗೂ ಉತ್ಪತ್ತಿ ತಾಣ ನಾಶ ಚಟುವಟಿಕೆಗೆ ಅಗತ್ಯವಿರುವ ಟೆಮಿಫಾಸ್ ದ್ರಾವಣ ಹಾಗೂ ತುರ್ತು ಸಂದರ್ಭಗಳಲ್ಲಿ ಒಳಾಂಗಣ ಧೂಮೀಕರಣಕ್ಕೆ ಬಳಸುವ ಪೈರಿಥ್ರಮ್ ಎಕ್ಸ್ಟ್ರಾಕ್ಟ್ ರಾಸಾಯನಿಕಗಳ ಅಗತ್ಯ ದಾಸ್ತಾನು ಲಭ್ಯವಿದ್ದು ಸಮರ್ಪಕವಾಗಿ ಬಳಸಲಾಗುತ್ತಿದೆ.

20. ಪ್ರತಿ ಆಶಾ ಕಾರ್ಯಕರ್ತೆಯರಿಗೆ ಲಾರ್ವಾ ಸಮೀಕ್ಷೆ ನಡೆಸಲು ಗೌರವಧನ ರೂ 200/-ಗಳನ್ನು ಪ್ರತಿ ತಿಂಗಳು ನೀಡಲಾಗುತ್ತಿದೆ. ಆರೋಗ್ಯ ನಿರೀಕ್ಷಣಾಧಿಕಾರಿಗಳು ಮತ್ತು ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಿಗೆ ಪ್ರತಿ ತಿಂಗಳು ರೂ 300/-ಗಳನ್ನು ನೀಡಲಾಗುತ್ತಿದೆ.

21. ಸಹ ನಿರ್ದೇಶಕರು-ಎನ್‌ವಿಬಿಡಿಸಿಪಿ, ಇವರ ಅಧ್ಯಕ್ಷತೆಯಲ್ಲಿ ವಲಯವಾರು ಸಭೆಯನ್ನು ಪ್ರತಿ ವಾರಕ್ಕೊಮ್ಮೆ ವರ್ಚುವಲ್ ಮಾಧ್ಯಮದ ಮೂಲಕ ನಡೆಸಲಾಗುತ್ತಿದ್ದು, ಬಿಬಿಎಂಪಿ ಸೇರಿದಂತೆ ಜಿಲ್ಲಾವಾರು ಡೆಂಗೀ ಪರಿಸ್ಥಿತಿಯನ್ನು ವಿಶ್ಲೇಷಿಸಿ, ನಿಯಂತ್ರಣಕ್ಕಾಗಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಲಾಗುತ್ತಿದೆ.

22. ಬಿಬಿಎಂಪಿ ವ್ಯಾಪ್ತಿಯ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ಡೆಂಗಿ ಪ್ರಕರಣಗಳ ಮಾಹಿತಿಯನ್ನು IHIP Portal ಮೂಲಕ ಪಡೆಯಲಾಗುತ್ತಿದ್ದು, ವಿವರವನ್ನು ಸಂಬಂಧಪಟ್ಟ ವಾರ್ಡ್ ವೈದ್ಯರೊಂದಿಗೆ ಹಂಚಿಕೊಂಡು ತುರ್ತಾಗಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

23. ರಾಜ್ಯದ ದೈನಂದಿನ ಡೆಂಗಿ ಜ್ವರ ಪರಿಸ್ಥಿತಿಯ ಸೂಕ್ಷ್ಮ ಮೇಲ್ವಿಚಾರಣೆ ಹಾಗೂ ಉಸ್ತುವಾರಿಗಾಗಿ, ಎನ್ ವಿ ಬಿ ಡಿಸಿ ಪಿ ವಿಭಾಗದಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆರೋಗ್ಯಸೌಧ, ಬೆಂಗಳೂರು, ಇಲ್ಲಿ 'ಡೆಂಗಿ ವಾರ್ ರೂಮ್ 'ಅನ್ನು ಸಕ್ರಿಯಗೊಳಿಸಲಾಗಿದೆ.

1. ಎಲ್ಲಾ ಜಿಲ್ಲೆಗಳು ಹಾಗೂ ಬಿಬಿಎಂಪಿ ವ್ಯಾಪ್ತಿಯ ಡೆಂಗಿ ಜ್ವರ ಪರಿಸ್ಥಿತಿಯ ಮೇಲ್ವಿಚಾರಣೆ ಹಾಗೂ ದತ್ತಾಂಶ/ಮಾಹಿತಿ ಸಂಗ್ರಹಣೆಗಾಗಿ 'ಕಂಟ್ರೋಲ್ ರೂಮ್ / ಡೆಂಗಿ ವಾರ್ ರೂಮ್ 'ಅನ್ನು ಸಕ್ರಿಯಗೊಳಿಸಲಾಗಿದೆ.

2. ಡೆಂಗಿ ಪರಿಸ್ಥಿತಿಯ ದೈನಂದಿನ ನಿಗಾವಣೆಗಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ಅನ್ನು ರಚಿಸಲಾಗಿದ್ದು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು – ಜಿಲ್ಲಾ ಪಂಚಾಯತಿ, ಪ್ರಾಜೆಕ್ಟ್ ಡೈರೆಕ್ಟರ್ – ನಗರಾಭಿವೃದ್ಧಿ, ವಿಭಾಗ ಮುಖ್ಯಸ್ಥರು – P & SM, ಮೆಡಿಕಲ್ ಕಾಲೇಜು, ಜಿಲ್ಲಾ ಆರೋಗ್ಯಾಧಿಕಾರಿಗಳು, ಜಿಲ್ಲಾಧ್ಯಕ್ಷರು – IMA & IAP, ಉಪನಿರ್ದೇಶಕರು - ಸಾರ್ವಜನಿಕ ಶಿಕ್ಷಣ, ಇವರುಗಳು ಸದರಿ ಟಾಸ್ಕ್ ಫೋರ್ಸ್ ನ ಸದಸ್ಯರಾಗಿರುತ್ತಾರೆ ಹಾಗೂ ಜಿಲ್ಲಾ ವಿಬಿಡಿ ನಿಯಂತ್ರಣಾಧಿಕಾರಿಗಳು, ಜಿಲ್ಲಾ

ಟಾಸ್ಕ ಫೋರ್ಸ್ ನ ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ. ವಾರಕ್ಕೊಮ್ಮೆ ಟಾಸ್ಕ ಫೋರ್ಸ್ ಸಭೆ ಸೇರಿ, ಡೆಂಗಿ ಜ್ವರ ನಿಯಂತ್ರಣ ಕ್ರಮಗಳನ್ನು ಪರಿಶೀಲಿಸಿ, ಸ್ಥಳೀಯ ಡೆಂಗಿ ಪರಿಸ್ಥಿತಿಯ ಅನ್ವಯ ಅಗತ್ಯ ಸಲಹೆ ಸೂಚನೆಗಳನ್ನು ನೀಡುವುದು.

3. ಆರೋಗ್ಯ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತರು ತಮ್ಮ ವ್ಯಾಪ್ತಿಯ ಎಲ್ಲಾ ಮನೆಗಳು, ಶಾಲಾ-ಕಾಲೇಜು, ಕಛೇರಿಗಳಲ್ಲಿ ಪ್ರತಿ 15 ದಿನಗಳಿಗೊಮ್ಮೆ ಈಡಿಸ್ ಲಾರ್ವಾ ಸಮೀಕ್ಷೆ ಹಾಗೂ ಉತ್ಪತ್ತಿ ತಾಣ ಚಟುವಟಿಕೆಯನ್ನು ಪೂರ್ಣಗೊಳಿಸುವುದು. ಪಟ್ಟಣ / ನಗರ ಪ್ರದೇಶದಲ್ಲಿ ಸದರಿ ಚಟುವಟಿಕೆಗೆ ಆರೋಗ್ಯ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತರೊಂದಿಗೆ, ಆಯಾ ಸ್ಥಳೀಯ ಸಂಸ್ಥೆಗಳು ( Urban Local Body) ದಿನ ಒಂದಕ್ಕೆ @Rs 200/- ಗಳ ಗೌರವಧನದಂತೆ ಅಗತ್ಯ ಸಂಖ್ಯೆಯ ಸ್ವಯಂ ಸೇವಕರನ್ನು ಒದಗಿಸುವುದು.

   a) ಜೊತೆಗೆ ಡೆಂಗಿ ಜ್ವರ ನಿಯಂತ್ರಣ, ಚಿಕಿತ್ಸೆಯ ಸಂಬಂಧ ಅಗತ್ಯ ಆರೋಗ್ಯ ಶಿಕ್ಷಣ ಸಾಮಗ್ರಿಗಳೊಂದಿಗೆ, ಈಡಿಸ್ ಲಾರ್ವಾ ನಾಶ ಚಟುವಟಿಕೆಗೆ ಪ್ರತಿ ಶುಕ್ರವಾರ ಬೆಳಗ್ಗೆ ( ಅಥವಾ ಜಿಲ್ಲಾ ಟಾಸ್ಕ ಫೋರ್ಸ್ ನಿರ್ಧರಿಸಿದ ವಾರದ ಇತರ ದಿನದಂದು) ಗ್ರಾಮ, ಪಟ್ಟಣ ಹಾಗೂ ಜಿಲ್ಲಾ ಮಟ್ಟದಲ್ಲಿ, ಚುನಾಯಿತ ಪ್ರತಿನಿಧಿಗಳು, ಸಾರ್ವಜನಿಕರು ಹಾಗೂ ಇತರ ಇಲಾಖೆಗಳ ಸಕ್ರಿಯ ಪಾಲ್ಗೊಳ್ಳುವಿಕೆಯಿಂದ ವ್ಯಾಪಕ ಪ್ರಚಾರ ನೀಡುವುದು. ಇದರಿಂದ, ಸಾರ್ವಜನಿಕರು ತಮ್ಮ ಮನೆಯ ಒಳಗೆ ಹಾಗೂ ಹೊರಗೆ ಲಾರ್ವಾ ನಿರ್ಮೂಲನೆ ಕಾರ್ಯವನ್ನು ಹಾಗೂ ನೀರಿನ ಸಂಗ್ರಹಣೆಗಳನ್ನು ಉಜ್ಜಿ ತೊಳೆದು ಸ್ವಚ್ಛಗೊಳಿಸುವ ಚಟುವಟಿಕೆಯನ್ನು ಸ್ವಯಂಪ್ರೇರಿತರಾಗಿ ಕೈಗೊಳ್ಳುವಂತೆ ಪ್ರೇರೇಪಿಸಲಾಗುತ್ತಿದೆ.

   b) ಸದರಿ ಚಟುವಟಿಕೆಯು ನಡೆದ ದಿನ ಮಧ್ಯಾಹ್ನ ನೀರು ಸರಬರಾಜು ವ್ಯವಸ್ಥೆಯನ್ನು ಖಚಿತ ಪಡಿಸಿಕೊಳ್ಳುವುದು ಸ್ಥಳೀಯ ಆಡಳಿತದ ಜವಾಬ್ದಾರಿಯಾಗಿದೆ, ಇದರಿಂದ ಸಾರ್ವಜನಿಕರು ಪುನಃ ಅಗತ್ಯ ನೀರಿನ ಸಂಗ್ರಹಣೆಯನ್ನು ಮಾಡಬಹುದಾಗಿದೆ.

4. ಬಿಬಿಎಂಪಿ ಮತ್ತು ಎಲ್ಲಾ ಜಿಲ್ಲೆಗಳು Hotspot ಅನ್ನು ಗುರುತಿಸಿ (Hotspot : an area with radius of about 100 meters within which two or more dengue positive cases have been reported), Hotspot ಗಳ ನಿಖರ ಮಾಹಿತಿ ( ಗ್ರಾಮ/ ಸ್ಥಳ/ ವಾರ್ಡ್)ಯನ್ನು ನಿಗದಿತ ನಮೂನೆಯಲ್ಲಿ State War Room ಗೆ ಸಲ್ಲಿಸುವುದು. ಸದರಿ ಕೆಳಕಂಡ ಕ್ರಮಗಳಿಂದ Hotspotಗಳ ಸಂಖ್ಯೆಯು ಇಳಿಮುಖವಾಗುವುದನ್ನು ಖಚಿತಪಡಿಸಿಕೊಳ್ಳುವುದೂ ಸಹ ಕಡ್ಡಾಯವಾಗಿದೆ:

   a) ಸದರಿ Hotspot ಗಳಲ್ಲಿ ಲಾರ್ವಾ ನಾಶ ಚಟುವಟಕೆಯನ್ನು ತೀವ್ರಗೊಳಿಸುವುದು , ಒಳಾಂಗಣ/ಹೊರಾಂಗಣದಲ್ಲಿ ಲಾರ್ವಾನಾಶಕಗಳ ಬಳಕೆ ಹಾಗೂ ಒಳಾಂಗಣದಲ್ಲಿ indoor space spray ಯನ್ನು ಕೈಗೊಂಡು ಮನೆಯ ಸದಸ್ಯರನ್ನು ಕನಿಷ್ಠ 30 ನಿಮಿಷಗಳ ಕಾಲ ಮನೆಗಳಿಂದ ಹೊರಗೆ ಇರುವಂತೆ ಸೂಚಿಸಲಾಗಿದೆ.

b) ಸದರಿ ಸ್ಥಳಗಳಲ್ಲಿ Fever clinic ಗಳನ್ನು ಸಕ್ರಿಯಗೊಳಿಸಲಾಗಿದೆ.

c) ಈ ಪ್ರದೇಶಗಳಲ್ಲಿ, ಬಿಪಿಎಲ್ ಕುಟುಂಬಗಳಿಗೆ ಸೊಳ್ಳೆ ನಿರೋಧಕ ಬೇವಿನ ಎಣ್ಣೆಯ ವಿತರಣೆಯನ್ನು ಖಚಿತಪಡಿಸಿಕೊಳ್ಳುವುದು, ಹಾಗೂ ಕೈ-ಕಾಲು ಹಾಗೂ ಕುತ್ತಿಗೆಯ ಭಾಗದಲ್ಲಿ ಹಚ್ಚಿಕೊಳ್ಳುವಂತೆ ತಿಳಿಸಲಾಗಿದೆ.

i. ಸದರಿ ಉತ್ಪನ್ನವು ಲಭ್ಯವಿಲ್ಲದಿದ್ದಲ್ಲಿ, Citronella oil/ lemon grass oil ಗಳನ್ನು ಅಥವಾ DEET (N,N-diethyl-meta-toluamide) ಆಧಾರಿತ ಕ್ರೀಂ ಗಳನ್ನು ವಿತರಣೆಯನ್ನು ಸ್ಥಳೀಯ ಜಿಲ್ಲಾ ಆರೋಗ್ಯಾಧಿಕಾರಿಗಳು/ ಮುಖ್ಯ ಆರೋಗ್ಯಾಧಿಕಾರಿಗಳು – ಸಾರ್ವಜನಿಕ ಆರೋಗ್ಯ , ಬಿಬಿಎಂಪಿ, ಇವರು ಪರಿಗಣಿಸಬಹುದಾಗಿದೆ.

ii. ಸದರಿ ಸೊಳ್ಳೆ ನಿರೋಧಕ ಎಣ್ಣೆ/ಕ್ರೀಂ ಗಳನ್ನು ನಿಯಮಾನುಸಾರ ಸ್ಥಳೀಯವಾಗಿ ಖರೀದಿಸಲು CSR/ದಾನಿಗಳ ವಂತಿಕೆಯನ್ನು ಅಥವಾ ಸಂಬಂಧಪಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರ/ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಲಭ್ಯವಿರುವ ARS/AbAr- K ಅನುದಾನವನ್ನು ನಿಯಮಾನುಸಾರ ಬಳಸುವುದು. ಆದಾಗ್ಯೂ, ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರ/ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹೆಚ್ಚುವರಿ ಅನುದಾನದ ಬೇಡಿಕೆಯನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯತ್/ ತಾಲ್ಲೂಕು ಪಂಚಾಯತ್ ಗಳು ಭರಿಸುವುದು.

iii. ಸೊಳ್ಳೆ ನಿರೋಧಕ ಎಣ್ಣೆ/ಕ್ರೀಂ ಗಳನ್ನು ಪಡೆದ ಮನೆಯ ಸದಸ್ಯರ ಹೆಸರು, ರೇಷನ್ ಕಾರ್ಡ್ ಸಂಖ್ಯೆ, ಮೊಬೈಲ್ ಸಂಖ್ಯೆ, ಇತ್ಯಾದಿ ಅಗತ್ಯ ಮಾಹಿತಿಯನ್ನು ಒಳಗೊಂಡ ದಾಖಲೆಗಳನ್ನು ನಿರ್ವಹಿಸಬೇಕು.

d) ಪ್ರತಿ ಡೆಂಗಿ ಜ್ವರ ಪ್ರಕರಣವನ್ನು, ರೋಗ ಲಕ್ಷಣಗಳು ಕಂಡು ಬಂದ ದಿನದಿಂದ, ಸದರಿಯವರ ಆರೋಗ್ಯ ಸ್ಥಿತಿಯ ಕುರಿತು 14 ದಿನಗಳು ಅನುಪಾಲನೆ ಮಾಡುವುದು ಹಾಗೂ ನಿಗದಿತ ವರದಿ ನಮೂನೆಯಲ್ಲಿ State War Room ಗೆ ವರದಿಯನ್ನು ಸಲ್ಲಿಸುವುದು. ಇಂತಹ ಡೆಂಗಿ ಪ್ರಕರಣಗಳಿಗೆ, ಸಾಧಾರಣ ಡೆಂಗಿ ಜ್ವರವು ಮಧ್ಯಮ / ತೀವ್ರ ಡೆಂಗಿ ಜ್ವರವಾಗಿ ಪರಿಣಮಿಸುವಲ್ಲಿ ಕಂಡುಬರುವ ಅಪಾಯದ ಚಿನ್ಹೆಗಳ (early warning signs) ಕುರಿತು ಶಿಕ್ಷಣ ನೀಡುವುದು. Hotspot ನಿಂದ ಹೊರಗಿರುವ ಡೆಂಗಿ ಜ್ವರ ಪ್ರಕರಣಗಳಿಗೂ ಸಹ ಈ ನಿರ್ದೇಶನವನ್ನು ಅನುಪಾಲನೆ ಮಾಡುವುದು ಕಡ್ಡಾಯವಾಗಿದೆ.

5. ಡೆಂಗಿ ಜ್ವರ ಪ್ರಕರಣಗಳ ಅಗತ್ಯ ನಿರ್ವಹಣೆಗಾಗಿ ತಾಲ್ಲೂಕು ಹಾಗೂ ಜಿಲ್ಲಾಸ್ಪತ್ರೆಗಳಲ್ಲಿ ಕನಿಷ್ಠ ತಲಾ 5 ಹಾಗೂ 8-10 ಬೆಡ್ ಗಳನ್ನು ಮೀಸಲಿಡುವುದು. ಈ ಸಂಖ್ಯೆಯ ಡೆಂಗಿ ಜ್ವರ ಪ್ರಕರಣಗಳಿಲ್ಲದಿದ್ದಲ್ಲಿ, ಸದರಿ ಬೆಡ್ ಗಳನ್ನು ಇತರೆ ರೋಗಿಗಳ ಆರೈಕೆಗೆ ಬಳಸುವುದು.

6. ಡೆಂಗಿ ಜ್ವರ ಪ್ರಕರಣಗಳ ಪರೀಕ್ಷೆ, ಚಿಕಿತ್ಸೆ ಹಾಗೂ ನಿರ್ವಹಣೆಯ ಸೌಲಭ್ಯಗಳನ್ನು (ICU ಸೇರಿದಂತೆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿನ ಎಲ್ಲಾ ಆರೋಗ್ಯ ಸಂಸ್ಥೆಗಳಲ್ಲಿ ಸಂಪೂರ್ಣ ಉಚಿತವಾಗಿ ಒದಗಿಸುವುದು (BPL & APL ವರ್ಗದವರಿಗೆ).

7. ಡೆಂಗಿ ಜ್ವರ ಪ್ರಕರಣಗಳ ಸೂಕ್ತ ನಿರ್ವಹಣೆಗಾಗಿ ಎಲ್ಲಾ ಆರೋಗ್ಯ ಸಂಸ್ಥೆಗಳಲ್ಲಿ ಟೆಸ್ಟಿಂಗ್ ಕಿಟ್ ಗಳು, ಅಗತ್ಯ ಪ್ರಮಾಣದ ಔಷಧಿ ಹಾಗೂ IV Fluids ನ ದಾಸ್ತಾನು ಇರಿಸಲಾಗಿದೆ. ಅಗತ್ಯವಿದ್ದಲ್ಲಿ ನಿಯಮಾನುಸಾರ ಸ್ಥಳೀಯವಾಗಿ ಖರೀದಿ ಪ್ರಕ್ರಿಯೆಯನ್ನು ಪಾಲಿಸುವುದು. ಅದರಂತೆ, ಜಿಲ್ಲಾವಾರು ಸರ್ಕಾರಿ ಹಾಗೂ ಖಾಸಗಿ ರಕ್ತನಿಧಿಗಳಿಂದ Platelet, Fresh Frozen Plasma ಹಾಗೂ ಇತರ Component ಗಳ ದೈನಂದಿನ ಮಾಹಿತಿಯ ಲಭ್ಯತೆಯನ್ನು e-Rakt Kosh ನಲ್ಲಿ ಖಚಿತಪಡಿಸಿಕೊಳ್ಳುವುದು.

8. ಡೆಂಗಿ ಜ್ವರ ನಿರ್ವಹಣೆಯ ಸಂಬಂಧ National Guidelines on Dengue fever management (as specified in GoI 2023 guidelines) ಶಿಷ್ಟಾಚಾರವನ್ನು ಕಡ್ಡಾಯವಾಗಿ ಎಲ್ಲಾ ವೈದ್ಯರು ಪಾಲಿಸುವುದು. ಮುಂದುವರೆದು, Tele ICU ಸೌಲಭ್ಯವಿದ್ದಲ್ಲಿ, ಡೆಂಗಿ ಜ್ವರ ಪ್ರಕರಣಗಳನ್ನು ಮೇಲ್ವಿಚಾರಣೆಯನ್ನು ಮಾಡುವಂತೆ ಸೂಚಿಸಲಾಗಿದೆ.

**ಡೆಂಗಿ ನಿಯಂತ್ರಣದ ನಿಟ್ಟಿನಲ್ಲಿ ಅನುಷ್ಠಾನಗೊಳಿಸಿರುವ ಆರೋಗ್ಯ ಶಿಕ್ಷಣ ಚಟುವಟಿಕೆಗಳು**:

ಮಾಹಿತಿ ಶಿಕ್ಷಣ ಮತ್ತು ಸಂಪರ್ಕ ಸಂವಹನ ಚಟುವಟಿಕೆಗಳ ಮೂಲಕ ಸಮುದಾಯದಲ್ಲಿ ಉತ್ತಮ ಜಾಗೃತಿ ಮೂಡಿಸಲು ಸ್ಥಳೀಯ ಭಾಷೆಗಳಿಗನು ಗುಣವಾಗಿ ಐಇಸಿ ಚಟುವಟಿಕೆಗಳನ್ನು IPC, Mid Media, Social Media, News Media, Mass Media, Digital Media ಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಾಗುತ್ತಿದೆ.

1) ಡೆಂಗಿ ಜ್ವರ ನಿಯಂತ್ರಣಕ್ಕಾಗಿ ಪ್ರತೀ ವರ್ಷ ಮೇ 16 ರಂದು ರಾಷ್ಟ್ರೀಯ ಡೆಂಗಿ ದಿನಾಚರಣೆಯನ್ನುಆಚರಿಸಲಾಗುತ್ತಿದ್ದು, ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ರಾಜ್ಯ, ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮವಾರು ಆಚರಿಸಿ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.
2) ಜುಲೈ ಮಾಹೆಯನ್ನು ಡೆಂಗಿ ವಿರೋಧಿ ಮಾಸವನ್ನಾಗಿ ಆಚರಿಸಲಾಗುತ್ತಿದೆ.
3) ಈ ಸಂದರ್ಭದಲ್ಲಿ, ದೂರದರ್ಶನ ಹಾಗೂ ಆಕಾಶವಾಣಿಯಲ್ಲಿ ನಡೆದ ಸಂದರ್ಶನದಲ್ಲಿ ಹಾಗೂ ಫೋನ್‌ಇನ್ ನೇರ ಕಾರ್ಯಕ್ರಮದಲ್ಲಿ ರಾಜ್ಯ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡು, ಅಗತ್ಯ ಮಾಹಿತಿಯನ್ನು ಹಾಗೂ ಡೆಂಗಿ ನಿಯಂತ್ರಣದಲ್ಲಿ ಸಮುದಾಯದ ಪಾತ್ರದ ಕುರಿತು ಸಂಪೂರ್ಣ ಮಾಹಿತಿಯನ್ನು ನೀಡಿರುತ್ತಾರೆ.

4) ಶಾಲಾ ಶಿಕ್ಷಕರುಗಳಿಗೆ ಡೆಂಗಿ ನಿಯಂತ್ರಣ ಮತ್ತು ಮುಂಜಾಗ್ರತೆ ಬಗ್ಗೆ ಅಡ್ವೊಕೆಸಿ ಕಾರ್ಯಗಾರವನ್ನು ನಡೆಸಲಾಗಿದೆ. ರಾಜ್ಯ ಮಟ್ಟ, ಜಿಲ್ಲಾ ಮಟ್ಟ, ತಾಲ್ಲೂಕು ಮಟ್ಟದಲ್ಲಿಅರಿವು ಮೂಡಿಸಲಾಗಿದೆ ಅದರಂತೆ ತರಬೇತಿ ಹೊಂದಿದ ವಿಜ್ಞಾನ ಶಿಕ್ಷಕರು ಮಕ್ಕಳಿಗೆ ಡೆಂಗಿ ಬಗ್ಗೆ ಅರಿವು ಮೂಡಿಸಿ ಸಾರ್ವಜನಿಕರ ಪಾತ್ರದ ಬಗ್ಗೆಯು ತಿಳಿಸಿರುತ್ತಾರೆ.

5) ಗ್ರಾಮ/ವಾರ್ಡ್ ಮಟ್ಟದಲ್ಲಿ ಅಡ್ವೊಕೆಸಿ ಕಾರ್ಯಗಾರಗಳನ್ನು (ಗ್ರಾಮದ ಮುಖಂಡರು, ಚುನಾಯಿತ ಪ್ರತಿನಿಧಿಗಳು, ಶಾಲಾ ಶಿಕ್ಷಕರು ಅಂಗನವಾಡಿ ಕಾರ್ಯಕರ್ತೆಯರು, ಸ್ತ್ರೀ ಶಕ್ತಿ ಸಂಘದ ಪದಾಧಿಕಾರಿಗಳು, ಸ್ವಯಂ ಸೇವಕರು, ಹಾಲು ಉತ್ಪಾಧಕರ ಸಂಘದ ಸದಸ್ಯರುಗಳು, ಧಾರ್ಮಿಕ ಮುಖಂಡರು ಒಳಗೊಂಡಂತೆ) ನಡೆಸಲಾಗಿದೆ.

6) ತಾಲ್ಲೂಕು ಮಟ್ಟದಲ್ಲಿ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ಪಿ.ಡಿ.ಓ) ಅಡ್ವೊಕೆಸಿ ಕಾರ್ಯಗಾರಗಳನ್ನು ಹಮ್ಮಿಕೊಂಡು ತರಬೇತಿ ನೀಡಲಾಗಿದೆ.

7) ದಿನ ಪತ್ರಿಕೆಗಳಲ್ಲಿ ಡೆಂಗಿಜ್ವರ – ನಿರ್ವಹಣೆ – ನಿಯಂತ್ರಣ ಕುರಿತು ಜಾಹಿರಾತು ಮೂಲಕ ಪ್ರಚುರ ಪಡಿಸಲಾಗಿದೆ.

8) ಸನ್ಮಾನ್ಯ ಮುಖ್ಯ ಮಂತ್ರಿಯವರಿಂದ ಮತ್ತು ಮಾನ್ಯ ಆರೋಗ್ಯ ಸಚಿವರಿಂದ ಡೆಂಗಿ ಜ್ವರ ಮತ್ತು ನಿಯಂತ್ರಣ ಕುರಿತು ಸಾರ್ವಜನಿಕರಿಗೆ ವಿಡಿಯೋ ಸಂದೇಶವನ್ನು ಎಲ್ಲಾ ಸಾಮಾಜಿಕ ಜಾಲತಾಣದಲ್ಲಿ ಪ್ರಚುರಗೊಳಿಸಲಾಗಿದೆ.

9) ಮಾನ್ಯ ಆರೋಗ್ಯ ಸಚಿವರು ಪ್ರತಿ ಶುಕ್ರವಾರ – "ಲಾರ್ವಾ ನಿರ್ಮೂಲನ ದಿನ" ವನ್ನು ಆಚರಿಸುವ ಕಾರ್ಯಕ್ರಮವನ್ನು ದಿನಾಂಕ:28-06-2024 ರಂದು ಬಾಗಲಕೋಟೆ ಜಿಲ್ಲೆಯಲ್ಲಿ ಚಾಲನೆ ನೀಡಿದರು.

10) ಪ್ರತಿ ಶುಕ್ರವಾರ – "ಲಾರ್ವಾ ನಿರ್ಮೂಲನ ದಿನ" ವನ್ನು ಆಚರಿಸಲಾಗುತ್ತಿದ್ದು ಆ ದಿನದಂದು ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ತಮ್ಮ ತಮ್ಮ ವ್ಯಾಪ್ತಿಯ ಮನೆ – ಕಛೇರಿ- ಶಾಲಾ-ಕಾಲೇಜು, ಸಂಸ್ಥೆಗಳು, (ಸರ್ಕಾರಿ ಹಾಗೂ ಖಾಸಗಿ) ಈಡೀಸ್ ಲಾರ್ವಾ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಕಾರ್ಯವನ್ನು ಮಾಡಲಾಗುತ್ತಿದೆ.

11) ಡೆಂಗಿ ಜ್ವರ ಹೆಚ್ಚು ಕಂಡುಬಂದ ಪ್ರದೇಶಗಳಲ್ಲಿ ಜ್ವರ ಚಿಕಿತ್ಸಾ ಕೇಂದ್ರವನ್ನು ತೆರೆದು ಡೆಂಗಿ ಜ್ವರದ ಚಿಕಿತ್ಸೆ ನೀಡಿ – ನಿರ್ವಹಣೆ – ನಿಯಂತ್ರಣ ಕುರಿತು ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ.

12) ಪ್ರದರ್ಶನ ಫಲಕಗಳೊಂದಿಗೆ (ಫ್ಲೆಕಾರ್ಡ್) ಜಾಥಾ ಕಾರ್ಯಕ್ರಮ ಹಾಗೂ ವಸ್ತು ಪ್ರದರ್ಶನ ಮಾಡಲಾಗುತ್ತಿದೆ.

13) ಹೋರ್ಡಿಂಗ್‌ಗಳು, ಬ್ಯಾನರ್‌ಗಳು, ಪೋಸ್ಟರ್‌ಗಳನ್ನು (ಜನಜಂಗುಳಿ ಪ್ರಮುಖ ಸ್ಥಳಗಳು) ಅಳವಡಿಕೆ.

14) ಮುದ್ರಿತ ವಸ್ತುಗಳು ಮೂಲಕ ಐಇಸಿ ಚಟುವಟಿಕೆಗಳು (ಕರಪತ್ರ, ಮಡಿಕೆಪತ್ರ, ಭಿತ್ತಿ ಪತ್ರಗಳು, ಇತ್ಯಾದಿ.)

15) ಸ್ಥಳೀಯ ಚಾನಲ್‌ಗಳಲ್ಲಿ ಟಿ.ವಿ.ಸ್ಪಾಟ್‌ಗಳು/ ಸ್ಕ್ರಾಲ್ ಸಂದೇಶಗಳ ಭಿತ್ತರ.
16) ಸಾಮಾಜಿಕ ಮಾಧ್ಯಮಗಳ ಮೂಲಕ ಸಂದೇಶಗಳು ಮತ್ತು ಸಮೂಹ ಮಾಧ್ಯಮದ ಮೂಲಕ (ಫೇಸ್‌ಬುಕ್. ಯೂಟೂಬ್. ವಾಟ್ಸ್‌ಆಪ್. ಇತ್ಯಾದಿ.) ಸಂದೇಶಗಳು ಹಾಗೂ ವಿಡಿಯೋಸ್ಪಾಟ್‌ಗಳ ರವಾನೆ.
17) ಬಸ್ಸುಗಳು ಮತ್ತು ಬಸ್ ತಂಗುದಾಣಗಳ ಮೇಲೆ ಪ್ರಚಾರ ಹಾಗೂ ರಾಜ್ಯ ಸಾರಿಗೆ ಬಸ್ ನಿಲ್ದಾಣಗಳಲ್ಲಿ ಮೈಕಿಂಗ್. ವಿಡಿಯೋ ಆಡಿಯೋ ಕ್ಲಿಪಿಂಗ್‌ಗಳನ್ನು ಭಿತ್ತರಿಸುವುದು.
18) ಪ್ರತಿದಿನ ಘನತ್ಯಾಜ್ಯಾ ಸಂಗ್ರಹಣಕ್ಕೆ ಬರುವ ವಾಹನಗಳ ಮೂಲಕ ಡೆಂಗಿ ನಿಯಂತ್ರಣ ಕುರಿತು ಮೈಕಿಂಗ್ ಮೂಲಕ ಪ್ರಚುರ ಪಡಿಸಲಾಗುತ್ತಿದೆ.

ಒಟ್ಟಾರೆಯಾಗಿ. ಡೆಂಗಿ ಜ್ವರ, ನಿರ್ವಹಣೆ, ಅಗತ್ಯ ಮುಂಜಾಗ್ರತಾ ಹಾಗೂ ನಿಯಂತ್ರಣ ಕ್ರಮಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ. ಎಂಬ ಅಂಶವನ್ನು ತಮ್ಮ ಅವಗಾಹನೆಗೆ ಸಲ್ಲಿಸಲಾಗಿದೆ.

DEPUTY DIRECTOR-NVBDCP
Directorate of Health & FW Services
Arogya Soudha, Magadi Road
Bengaluru-560023

## ಅನುಬಂಧ -3

ಡೆಂಗಿ **ICU Admission patient** ಪ್ರಕರಣಗಳ ಜಿಲ್ಲಾವಾರು ವಿವರ

| SL NO | District | ICU Admission patient |
|---|---|---|
| 1 | BBMP | 8 |
| 2 | Dakshina Kannada | 3 |
| 3 | Davanagere | 2 |
| 4 | Shivamogga | 2 |
| 5 | Mysuru | 2 |
| 6 | Udupi | 2 |
| 7 | Chitradurga | 1 |
| | Total | 20 |

DEPUTY DIRECTOR-NVBDCP
Directorate of Health & FW Services
Arogya Soudha, Magadi Road
Bengaluru-560023